**All India Radio: Bangalore**
**National Bulletin In Kannada**
**24.09.2025  19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.09.2025  19.35 p.m.**

**<><><><>**

ಮುಖ್ಯಾಂಶಗಳು

- ಭಾರತದ ಹಡಗು ನಿರ್ಮಾಣ, ಕಡಲ ಪರಿಸರ ವ್ಯವಸ್ಥೆ ಪುನರುಜ್ಜೀವನಗೊಳಿಸಲು ೬೯ ಸಾವಿರ ೭೨೫ ಕೋಟಿ ರೂಪಾಯಿಗಳ ಸಮಗ್ರ ಪ್ಯಾಕೇಜ್‌ಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
- ಭಾರತವನ್ನು ಸಾಂಸ್ಕೃತಿಕ ಶಕ್ತಿಯಾಗಿ ಗುರುತಿಸಿ, ಬಲಪಡಿಸಲು ಸಾಮೂಹಿಕ ಪ್ರಯತ್ನ ಅಗತ್ಯ - ರಾಷ್ಟ್ರಪತಿ ದ್ರೌಪದಿ ಮುರ್ಮು
- ಸರಸ್ವತಿ ಸಮ್ಮಾನ್ ಪುರಸ್ಕೃತ ಹಿರಿಯ ಸಾಹಿತಿ ಡಾ. ಎಸ್.ಎಲ್ ಭೈರಪ್ಪ ನಿಧನ ; ರಾಷ್ಟ್ರಪತಿ, ಪ್ರಧಾನಿ ಸೇರಿದಂತೆ ಗಣ್ಯರ ಸಂತಾಪ
- ಏಷ್ಯಾಕಪ್ ಟಿ-೨೦ ಕ್ರಿಕೆಟ್ : ಸೂಪರ್ ಫೋರ್ ಹಂತದ ಪಂದ್ಯದಲ್ಲಿಂದು ಭಾರತ-ಬಾಂಗ್ಲಾದೇಶ ಮುಖಾಮುಖಿ

<><><><>

ಭಾರತದ ಹಡಗು ನಿರ್ಮಾಣ ಮತ್ತು ಕಡಲ ಪರಿಸರ ವ್ಯವಸ್ಥೆಯನ್ನು ಪುನರುಜ್ಜೀವನಗೊಳಿಸಲು ೬೯ ಸಾವಿರ ೭೨೫ ಕೋಟಿ ರೂಪಾಯಿಗಳ ಸಮಗ್ರ ಪ್ಯಾಕೇಜ್‌ಗೆ ಕೇಂದ್ರ ಸಚಿವ ಸಂಪುಟ ಇಂದು ಅನುಮೋದನೆ ನೀಡಿದೆ. ಈ ಕುರಿತು ನವದೆಹಲಿಯಲ್ಲಿಂದು ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ದೇಶೀಯ ಸಾಮರ್ಥ್ಯವನ್ನು ಬಲಪಡಿಸಲು, ದೀರ್ಘಕಾಲೀನ ಹಣಕಾಸು ಸುಧಾರಿಸಲು ಹಾಗೂ ಗ್ರೀನ್‌ಫೀಲ್ಡ್ ಮತ್ತು ಬ್ರೌನ್‌ಫೀಲ್ಡ್ ಶಿಪ್‌ಯಾರ್ಡ್ ಅಭಿವೃದ್ಧಿಯನ್ನು ಉತ್ತೇಜಿಸಲು ವಿನ್ಯಾಸಗೊಳಿಸಲಾದ ವಿಧಾನವನ್ನು ಈ ಪ್ಯಾಕೇಜ್ ಪರಿಚಯಿಸುತ್ತದೆ ಎಂದು ಹೇಳಿದರು. ಎಲ್ಲಾ ಉಪಕ್ರಮಗಳ ಅನುಷ್ಠಾನದ ಮೇಲ್ವಿಚಾರಣೆ ಮಾಡಲು ರಾಷ್ಟ್ರೀಯ ಹಡಗು ನಿರ್ಮಾಣ ಮಿಷನ್ ಸಹ ಸ್ಥಾಪಿಸಲಾಗುವುದು ಎಂದು ಅವರು ತಿಳಿಸಿದರು. ೧೦ ಲಕ್ಷ ೯೧ ಸಾವಿರ ರೈಲ್ವೆ ಉದ್ಯೋಗಿಗಳಿಗೆ ೭೮ ದಿನಗಳ ಉತ್ಪಾದಕತೆ ಸಂಬಂಧಿತ ಬೋನಸ್-ಪಿಎಲ್‌ಬಿ ಪಾವತಿಸಲು ಕೇಂದ್ರ ಸಚಿವ ಸಂಪುಟ ಇಂದು ಅನುಮೋದನೆ ನೀಡಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದರು.  ಅರ್ಹ ರೈಲ್ವೆ ಉದ್ಯೋಗಿಗೆ

ಪಿಎಲ್‌ಬಿ ಪಾವತಿಯನ್ನು ಪ್ರತಿ ವರ್ಷ ದುರ್ಗಾ ಪೂಜೆ ಮತ್ತು ದಸರಾ ರಜಾ ದಿನಗಳ ಮೊದಲು ಮಾಡಲಾಗುತ್ತದೆ. ರೈಲ್ವೆ ನೌಕರರು ರೈಲ್ವೆಯ ಕಾರ್ಯಕ್ಷಮತೆಯನ್ನು ಸುಧಾರಿಸಲು ಶ್ರಮಿಸುವಂತೆ ಪ್ರೇರೇಪಿಸಲು ಪಿಎಲ್‌ಬಿ ಪಾವತಿಯು ಪ್ರೋತ್ಸಾಹಕವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಅವರು ವಿವರಿಸಿದರು. ಒಟ್ಟು ಎರಡು ಸಾವಿರದ ೨೭೭ ಕೋಟಿ ರೂಪಾಯಿಗಳ ವೆಚ್ಚದೊಂದಿಗೆ ಸಾಮರ್ಥ್ಯ ವೃದ್ಧಿ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿಗಾಗಿ ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಇಲಾಖೆ, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಮಂಡಳಿ ಡಿಎಸ್‌ಐಆರ್, ಸಿಎಸ್‌ಐಆರ್ ಯೋಜನೆಯನ್ನು ಸಂಪುಟ ಅನುಮೋದಿಸಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು. ಆರ್ಥಿಕ ವ್ಯವಹಾರಗಳ ಕುರಿತಾದ ಸಂಪುಟ ಸಮಿತಿ ಇಂದು ಬಿಹಾರದ ಭಕ್ತಿಯಾರ್ಪುರ್-ರಾಜ್‌ಗೀರ್-ತಿಲೈಯಾ ರೈಲು ಮಾರ್ಗದ ವಿಭಾಗವನ್ನು ೨ ಸಾವಿರದ ೧೯೨ ಕೋಟಿ ರೂಪಾಯಿಗಳ ವೆಚ್ಚದಲ್ಲಿ ದ್ವಿಪಥಗೊಳಿಸಲು ಅನುಮೋದನೆ ನೀಡಿದೆ ಎಂದು ರೈಲ್ವೆ ಸಚಿವರು ಮಾಹಿತಿ ನೀಡಿದರು.

<><><><>

ಭಾರತವನ್ನು ಸಾಂಸ್ಕೃತಿಕ ಶಕ್ತಿಯಾಗಿ ಗುರುತಿಸಿ, ಬಲಪಡಿಸಲು ಸಾಮೂಹಿಕ ಪ್ರಯತ್ನಗಳ ಅಗತ್ಯವಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿಂದು ಲಲಿತಾ ಕಲಾ ಅಕಾಡೆಮಿ ಆಯೋಜಿಸಿದ್ದ ೬೪ನೇ ರಾಷ್ಟ್ರೀಯ ಕಲಾ ಪ್ರದರ್ಶನದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮಾತನಾಡಿದ ಅವರು, ಸಾಂಸ್ಕೃತಿಕ ಪರಂಪರೆಯನ್ನು ಶ್ರೀಮಂತಗೊಳಿಸಲು ಮತ್ತು ಸಮಾಜವನ್ನು ಹೆಚ್ಚು ಸೂಕ್ಷ್ಮವಾಗಿಸಲು ಕಲೆ ಒಂದು ಪ್ರಬಲ ಮಾಧ್ಯಮವಾಗಿದೆ ಎಂದರು. ಭಾರತೀಯ ಕಲೆ ನಿರಂತರವಾಗಿ ವಿಕಸನಗೊಳ್ಳುತ್ತಿವೆ ಮತ್ತು ಹೊಸ ಆಯಾಮಗಳನ್ನು ಪ್ರಸ್ತುತಪಡಿಸುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು. ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಮಾತನಾಡಿ, ಕಲೆ ಮತ್ತು ಸೃಜನಶೀಲತೆ ಒಂದು ರಾಷ್ಟ್ರದ ಗುರತನ್ನು ಪ್ರತಿಬಿಂಬಿಸುತ್ತದೆ. ಅವು ವೈವಿಧ್ಯಮಯ ಭಾಷೆಗಳು, ಸಂಪ್ರದಾಯಗಳು ಮತ್ತು ಪೀಳಿಗೆಗೆ ಸಂಪರ್ಕ ಹೊಂದಿವೆ ಎಂದು ಅಭಿಪ್ರಾಯಪಟ್ಟರು.

<><><><>

ಪದ್ಮಭೂಷಣ, ಸರಸ್ವತಿ ಸಮ್ಮಾನ್ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಡಾ. ಎಸ್.ಎಲ್.ಭೈರಪ್ಪ ಅವರು ಬೆಂಗಳೂರಿನಲ್ಲಿಂದು ನಿಧನರಾಗಿದ್ದಾರೆ. ೯೪ ವರ್ಷದ ಎಸ್.ಎಲ್.ಭೈರಪ್ಪನವರು ಪ್ರಸಿದ್ಧ ಕನ್ನಡ ಕಾದಂಬರಿಕಾರ, ತತ್ವಜ್ಞಾನಿ ಮತ್ತು ಅನುಭವಿ ಲೇಖಕರಾಗಿದ್ದು, ೨೦೧೬ರಲ್ಲಿ ಪದ್ಮಶ್ರೀ, ೨೦೨೩ರಲ್ಲಿ ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದರು. ೨೦೧೦ರಲ್ಲಿ ಅವರಿಗೆ ಸರಸ್ವತಿ

ಸಮ್ಮಾನ್ ಪ್ರಶಸ್ತಿ ಒಲಿದು ಬಂದಿತ್ತು. ಭೈರಪ್ಪ ಅವರು ಪರ್ವ, ಆವರಣ, ಗೃಹಭಂಗ, ಮತದಾನ, ವಂಶವೃಕ್ಷ, ನಾಯಿನೆರಳು, ದಾಟು, ಉತ್ತರಕಾಂಡ, ಯಾನ, ಕವಲು, ಸಾಕ್ಷಿ ಸೇರಿದಂತೆ ಅನೇಕ ಕಾದಂಬರಿಗಳನ್ನು ಬರೆದಿದ್ದಾರೆ. ವಂಶವೃಕ್ಷ ಕಾದಂಬರಿಗೆ ೧೯೬೬ರಲ್ಲಿ ರಾಜ್ಯ ಸಾಹಿತ್ಯ ಅಕಾಡೆಮಿ, ದಾಟು ಕಾದಂಬರಿಗೆ ೧೯೭೫ರಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ದೊರೆತಿದೆ. ಭೈರಪ್ಪ ಅವರ ಕಾದಂಬರಿಗಳು ಇಂಗ್ಲೀಷ್ ಸೇರಿದಂತೆ ದೇಶ-ವಿದೇಶಗಳ ಭಾಷೆಗಳಿಗೆ ಅನುವಾದಗೊಂಡಿವೆ. ಹಾಸನ ಜಿಲ್ಲೆಯ ಸಂತೇಶಿವಾರ ಗ್ರಾಮದವರಾದ ಇವರು, ತಮ್ಮ ಸ್ವಗ್ರಾಮ ಮತ್ತು ಸುತ್ತಮುತ್ತಲಿನ ಕೆರೆಗಳಿಗೆ ನೀರು ತುಂಬಿಸಲು ಶ್ರಮಿಸಿದ್ದರು. ಎಸ್.ಎಲ್.ಭೈರಪ್ಪ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಸಾಹಿತಿಗಳು, ಗಣ್ಯರು ಸಂತಾಪ ಸೂಚಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಸಾಹಿತ್ಯ, ತತ್ವಶಾಸ್ತ್ರ, ಸಂಸ್ಕೃತಿ ಮತ್ತು ಬೌದ್ಧಿಕ ಕ್ಷೇತ್ರಗಳಲ್ಲಿ ಎಸ್.ಎಲ್.ಭೈರಪ್ಪನವರು ಗಮನಾರ್ಹ ಕೊಡುಗೆ ನೀಡಿದ್ದಾರೆ. ಅವರು ತಮ್ಮ ಕೃತಿಗಳ ಮೂಲಕ ಕನ್ನಡ ಸಾಹಿತ್ಯವನ್ನು ಅದರ ಸಾಂಸ್ಕೃತಿಕ ಬೇರುಗಳಿಗೆ ನಿಷ್ಠರಾಗಿ ಜಾಗತಿಕ ಮನ್ನಣೆ ತಂದುಕೊಟ್ಟರು ಎಂದು ಹೇಳಿದ್ದಾರೆ.

ದೇಶದ ಆತ್ಮಸಾಕ್ಷಿಯನ್ನು ಕಲಕುವ ಮತ್ತು ಭಾರತದ ಆತ್ಮವನ್ನು ಅಧ್ಯಯನ ಮಾಡಿದ ಮಹಾನ್ ಧೀಮಂತ ವ್ಯಕ್ತಿಯನ್ನು ದೇಶ ಇಂದು ಕಳೆದುಕೊಂಡಿದೆ. ನಿರ್ಭೀತ ಮತ್ತು ಕಾಲಾತೀತ ಚಿಂತಕರಾಗಿ ಎಸ್.ಎಲ್.ಭೈರಪ್ಪ ಅವರು, ತಮ್ಮ ಚಿಂತನಾಶೀಲ ಕೃತಿಗಳಿಂದ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸಿದ್ದಾರೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಡಾ. ಎಸ್.ಎಲ್.ಭೈರಪ್ಪನವರ ಕೃತಿಗಳು ಕನ್ನಡ ಮನಸ್ಸುಗಳ ಮೇಲೆ ಪ್ರಭಾವ ಬೀರಿದೆ ಹಿರಿಯ ಸಾಹಿತಿ ಮತ್ತು ವಿಮರ್ಶಕರಾದ ಎಸ್.ಆರ್.ವಿಜಯಶಂಕರ್ ಎಸ್.ಎಲ್. ಭೈರಪ್ಪನವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

**ಧ್ವನಿ: ಎಸ್.ಆರ್.ವಿಜಯಶಂಕರ್**

ಭೈರಪ್ಪನವರ ಬದುಕು ಮತ್ತು ಬರವಣಿಗೆ ಕುರಿತು ಹಿರಿಯ ವಿಂಗ್ ಕಮಾಂಡರ್ ಸುದರ್ಶನ್ ತಮ್ಮ ಅನಿಸಿಕೆ ಹಂಚಿಕೊಂಡು ಅವರ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ.

**ಧ್ವನಿ: ವಿಂಗ್ ಕಮಾಂಡರ್ ಸುದರ್ಶನ್**

ನಾಳೆ ಬೆಳಗ್ಗೆ ೮ ಗಂಟೆಯ ಬಳಿಕ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ಶುಕ್ರವಾರ ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಸಕಲ ಸರ್ಕಾರ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ.

<><><>

ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಏಷ್ಯಾಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಸೂಪರ್-೪ ಹಂತದ ಪಂದ್ಯದಲ್ಲಿ ಭಾರತ ಮತ್ತು ಬಾಂಗ್ಲಾದೇಶ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

<><><>

ಸೇವೆ ಮತ್ತು ಸುಶಾಸನ ಮಂತ್ರದಿಂದ ಅಂದರೆ ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಾರ್ಗದರ್ಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ, ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು ಈ ವಿಶೇಷ ಸರಣಿ - 'ಸೇವಾ ಪರ್ವ'ದಲ್ಲಿ ಕೇಂದ್ರ ಸರ್ಕಾರ ಭಾರತದ ಸೆಮಿಕಂಡಕ್ಟರ್ ಮಿಷನ್ ಮೂಲಕ ಭಾರತದ ಭವಿಷ್ಯವನ್ನು ಹೇಗೆ ರೂಪಿಸುತ್ತಿದೆ ಎಂಬುದರ ಕುರಿತು ಇದೀಗ ವಿಶೇಷ ವರದಿ ಮೂಡಿಬರಲಿದೆ.

**ಧ್ವನಿ : ವಿಶೇಷ ವರದಿ - ಹರ್ಷಿತಾ (ಒಂದು ನಿಮಿಷ)**

೨೦೨೧ರಲ್ಲಿ ಇಂಡಿಯಾ ಸೆಮಿಕಂಡಕ್ಟರ್ ಮಿಷನ್ ಪ್ರಾರಂಭವಾದಾಗಿನಿಂದ ಭಾರತವು ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಸೆಮಿಕಂಡಕ್ಟರ್ ವಲಯದಲ್ಲಿ ಅಪಾರ ಪ್ರಗತಿ ಸಾಧಿಸಿದೆ. ಈ ತಿಂಗಳು ನವದೆಹಲಿಯಲ್ಲಿ ನಡೆದ 'ಸೆಮಿಕಾನ್ ಇಂಡಿಯಾ -೨೦೨೫' ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಸೆಮಿಕಂಡ್ಕರ್ ಚಿಪ್‌ಗಳನ್ನು ಡಿಜಿಟಲ್ ಡೈಮೆಂಡ್ಸ್ ಎಂದು ಬಣ್ಣಿಸಿದ್ದರು. ಭಾರತ ಸೆಮಿಕಂಡಕ್ಟರ್ ಮಿಷನ್ ೭೬ ಸಾವಿರ ಕೋಟಿ ರೂಪಾಯಿ ಸೆಮಿಕಾನ್ ಇಂಡಿಯಾ ಕಾರ್ಯಕ್ರಮವನ್ನು ನಡೆಸುತ್ತಿದೆ. ಇದು ಸೆಮಿಕಂಡಕ್ಟರ್ ಮತ್ತು ಡಿಸ್‌ಪ್ಲೆ ತಯಾರಿಕೆಗೆ ಶೇಕಡ ೫೦ ರವರೆಗೆ ಬೆಂಬಲ ನೀಡುತ್ತದೆ. ಭಾರತದ ಸೆಮಿಕಂಡಕ್ಟರ್ ಪ್ರಯಾಣವು ಸೆಮಿಕಾನ್ ಇಂಡಿಯಾ -೨೦೨೫ರಲ್ಲಿ ಒಂದು ಪ್ರಮುಖ ಮೈಲಿಗಲ್ಲು ತಲುಪಿತು. ಈ ವೇಳೆ ಕೇಂದ್ರ ವಿದ್ಯುನ್ಮಾನ ಮತ್ತು ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಅಧಿಕೃತವಾಗಿ 'ಮೇಡ್ ಇನ್ ಇಂಡಿಯಾ ಚಿಪ್'ಗಳು ಮೊದಲ ಸೆಟ್ ಅನ್ನು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಹಸ್ತಾಂತರಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>